**ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ. ದಂಡಾಧಿಕಾರಿಗಳ ನ್ಯಾಯಾಲಯ, ಗೋಕಾಕ**

**ಸಿ.ಸಿ. ನಂ.** 2427/2024

ಪಿರ್ಯಾದುದಾರರುಃ ಶ್ರೀ ಗೂಳಪ್ಪ ಈರಪ್ಪ ವಿಜಯನಗರ,

**- ವಿರುದ್ಧ -**

ಆರೋಪಿತರು: ಶ್ರೀ ಬಾಳಪ್ಪ ಶಿವಪ್ಪ ಹುಲಕ್ಕುಂದ,

**ದಂಡ ಪ್ರಕ್ರಿಯೆ ಸಂಹಿತೆ ಕಲಂ. 313 ರ ಪ್ರಕಾರ ಆರೋಪಿತರ ಹೇಳಿಕೆ**

ಪ್ರಶ್ನೆ 1. ಅಭಿಯೋಜನೆಯ ಪರ ಸಾಕ್ಷಿದಾರರು ಹೇಳಿರುವ ಸಾಕ್ಷ್ಯಗಳನ್ನು ಕೇಳಿಸಿಕೊಂಡಿದ್ದೀರಾ?

ಉತ್ತರಃ

ಪ್ರಶ್ನೆ 2. ಚಾಸಾ.1/ ಶ್ರೀ ಗೂಳಪ್ಪ ಈರಪ್ಪ ವಿಜಯನಗರ, ಇವರು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿದಾರರು ಮತ್ತು ಆರೋಪಿಯಾದ ನೀವು ಒಳ್ಳೆಯ ಸ್ನೇಹಿತರಾಗಿರುತ್ತೀರಿ, ಹೀಗಿರುವಾಗ ಆರೋಪಿಯಾದ ನೀವು ನಿಮ್ಮ ಕೌಟುಂಬಿಕ ಕಾನೂನುಬದ್ಧ ಅವಶ್ಯಕತೆಗಳಿಗಾಗಿ ಪಿರ್ಯಾದುದಾರರ ಕಡೆಯಿಂದ ರೂ.4,00,000/- ಕೈಗಡ ಸಾಲ ಕೇಳಿದ್ದು, ಅದಕ್ಕೆ ಪಿರ್ಯಾದುದಾರರು 2023 ಏಪ್ರೀಲ್ ತಿಂಗಳ ಮೊದಲನೇ ವಾರದಲ್ಲಿ ರೂ.3,00,000/- ಗಳನ್ನು ಮತ್ತು ಏಪ್ರೀಲ್ -2023ರ 3ನೇ ವಾರದಲ್ಲಿ ರೂ.1,00,000/- ಗಳನ್ನು ಆರೋಪಿಯಾದ ನಿಮಗೆ ನೀಡಿರುತ್ತಾರೆ. ಹೀಗಿರುವಾಗ ಆರೋಪಿಯಾದ ನೀವು ಸದರಿ ಸಾಲದ ಹಣವನ್ನು 06 ತಿಂಗಳ ಒಳಗಾಗಿ ಮರಳಿ ಕೊಡುತ್ತೇನೆಂದು ತಿಳಿಸಿರುತ್ತಿರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ 3. ಇದೇ ಸಾಕ್ಷಿದಾರರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, 06 ತಿಂಗಳು ಮುಗಿದಾದ ನಂತರ ಪಿರ್ಯಾದುದಾರರು ಆರೋಪಿಯಾದ ನಿಮಗೆ ಸದರಿ ಸಾಲದ ಹಣವನ್ನು ಮರು ಪಾವತಿ ಮಾಡುವಂತೆ ಕೇಳಿದಾಗ, ಆರೋಪಿಯಾದ ನೀವು ಒಂದಿಲ್ಲಾ ಒಂದು ಕಾರಣಗಳನ್ನು ಹೇಳುತ್ತಾ ಮುಂದೂಡುತ್ತಾ ಬಂದಿರುತ್ತೀರಿ, ನಂತರ ಕೊನೆಗೆ ನೀವು ಇದೇ ವಾರದ ಫೇಬ್ರವರಿ 2024ರಂದು ಶುಗರ ಕೇನ ಬಿಲ್ ತೆಗೆದುಕೊಂಡು ನಂತರ ಸಾಲದ ಹಣವನ್ನು ಮರುಸಂದಾಯ ಮಾಡುತ್ತೇನೆ ಎಂದು ತಿಳಿಸಿರುತ್ತೀರಿ. ತದನಂತರ ಫೇಬ್ರವರಿ 2024ರಂದು ಪಿರ್ಯಾದುದಾರರು ಆರೋಪಿಯಾದ ನಿಮಗೆ ಸಾಲದ ಹಣವನ್ನು ಮರುಸಂದಾಯ ಮಾಡುವಂತೆ ವಿನಂತಿಸಿಕೊಂಡಾಗ ಕೊನೆಗೆ ನೀವು ದಿನಾಂಕ 28-02-2024ರಂದು ನಿಮ್ಮ ಖಾತೆಯಾದ ಡಿ ಸಿ ಸಿ ಬ್ಯಾಂಕ್ ಗೋಕಾಕ ಶಾಖೆ ಇಲ್ಲಿಗೆ ಸೇರಿದ ಚೆಕ್ ನಂ.003084ನೇದ್ದನ್ನು ರೂ.4,00,000/- ಎಂದು ನಮೂದು ಮಾಡಿ ಪಿರ್ಯಾದುದಾರರಿಗೆ ನೀಡಿರುತ್ತಿರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಉತ್ತರಃ

ಪ್ರಶ್ನೆ **4.** ಇದೇ ಸಾಕ್ಷಿದಾರರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ನೀಡಿದ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯಿರುವ ಕೆನರಾ ಬ್ಯಾಂಕ್, ಗೋಕಾಕ ಶಾಖೆ ಇಲ್ಲಿಗೆ ನಗದೀಕರಣಕ್ಕಾಗಿ ದಿನಾಂಕ 02-03-2024ರಂದು ಹಾಜರುಪಡಿಸಿದಾಗ, ಆರೋಪಿಯಾದ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇರುವುದಿಲ್ಲ (Funds Insufficient) ಎಂಬ ಹಿಂಬರಹ ಹಾಗೂ ಮೆಮೋದೊಂದಿಗೆ ದಿನಾಂಕ04-03-2024ರಂದು ಸದರಿ ಚೆಕ್ ಅಮಾನ್ಯಗೊಂಡಿರುವುದಾಗಿ ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ ?

ಉತ್ತರಃ

ಪ್ರಶ್ನೆ 5. ಇದೇ ಸಾಕ್ಷಿದಾರರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದುದಾರರು ಆರೋಪಿಯಾದ ನೀವು ನೀಡಿದ ಚೆಕ್ಕು ಅಮಾನ್ಯಗೊಂಡ ಬಗ್ಗೆ ತಮ್ಮ ವಕೀಲರ ಮುಖಾಂತರ ದಿನಾಂಕ18-03-2024ರಂದು ತಿಳುವಳಿಕೆ ಪತ್ರವನ್ನು ಆರೋಪಿಯಾದ ನಿಮಗೆ ನೋಂದಾಯಿತ ಅಂಚೆ ಮೂಲಕ ಕಳುಹಿಸಿದ್ದು, ಸದರಿ ನೋಟಿಸು ದಿನಾಂಕ25-03-2024 ರಂದು ಜಾರಿಯಾಗಿದ್ದರೂ ಸಹ ಆರೋಪಿಯಾದ ನೀವು ನಿಗದಿತ ಸಮಯದಲ್ಲಿ ಚೆಕ್ಕಿನ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ ?

ಉತ್ತರಃ

ಪ್ರಶ್ನೆ 6. ಇದೇ ಸಾಕ್ಷಿದಾರರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿತರಾದ ನೀವು ನೀಡಿದಂತ ಚೆಕ್ಕನ್ನು ನಿಪಿ.1, ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ.1(ಎ), ಬ್ಯಾಂಕ್‌ನವರು ನೀಡಿದಂತಹ ಹಿಂಬರಹವನ್ನು ನಿಪಿ.2, ತಿಳುವಳಿಕೆ ಪತ್ರದ ಕಚೇರಿ ಪ್ರತಿಯನ್ನು ನಿಪಿ.3, ಆರೋಪಿಗೆ ಕಳುಹಿಸಿರುವ ಅಂಚೆ ರಶೀದಿಯನ್ನು ನಿಪಿ.4, ಅಂಚೆ ತಲುಪೊಪ್ಪಿಗೆ ಪತ್ರವನ್ನು ನಿಪಿ.5 ಎಂದು ಗುರುತಿಸಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀವೇನು ಹೇಳುವಿರಿ ?

ಉತ್ತರಃ

ಪ್ರಶ್ನೆ 7. ಈ ಪ್ರಕರಣದ ಬಗ್ಗೆ ನೀವು ನ್ಯಾಯಾಲಯಕ್ಕೆ ಹೆಚ್ಚಿಗೆ ಏನಾದರೂ ಹೇಳಲು ಬಯಸುವಿರಾ ?

ಉತ್ತರಃ

ಪ್ರಶ್ನೆ 8. ನಿಮ್ಮ ಪರ ವಿಚಾರಣೆ ಮಾಡಲು ಸಾಕ್ಷಿಗಳೇನಾದರೂ ಇದೆಯಾ ?

ಉತ್ತರಃ

(ಮೇಲಿನ ಹೇಳಿಕೆಗಳನ್ನು ದಿಃ 24-09-2024 ರಂದು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿ, ನಂತರ ಆರೋಪಿ ಕೊಟ್ಟ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಡೀಕರಿಸುತ್ತೇನೆ.)

**(ರಾಜೀವ ಗೋಳಸಾರ)**
**ಪ್ರಧಾನ ಪ್ರ.ದ.ನ್ಯಾ. ದಂ, ಗೋಕಾಕ.**